# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ,
# ಬ್ಯಾಟರಾಯನಪುರ ಉಪ ವಿಭಾಗ, ವಾರ್ಡ್ ನಂ. 08(ಜಕ್ಕೂರು)
## ವಾರ್ಡ್‌ಸಮಿತಿ ಸಭೆ, ದಿನಾಂಕ: 03.09.2022 ರ
## ಸಭಾ ನಡುವಳಿ

ದಿನಾಂಕ: 03.09.2022 ರಂದು ಬೆಳ್ಳಿಗೆ 11.00 ಗಂಟೆಗೆ ವಾರ್ಡ್ ನಂ.08 ಜಕ್ಕೂರು ವ್ಯಾಪ್ತಿಯಲ್ಲಿ ವಾರ್ಡ್ ಸಮಿತಿಯ ಸಭೆಯನ್ನು ನೋಡಲ್ ಅಧಿಕಾರಿಯವರ ಅಧ್ಯಕ್ಷತೆಯಲ್ಲಿ ದಾಸರಹಳ್ಳಿ ಬಿಬಿಎಂಪಿ ಕಛೇರಿ ಆರಣದಲ್ಲಿ ನೆಡೆದ ವಾರ್ಡ್ ಸಮಿತಿಯ ಸಭೆಯ ನಡುವಳಿಗಳು

| ಕ್ರ.ಸಂ | ಸಭೆಗೆ ಹಾಜರಾಗಿರುವ ಅಧಿಕಾರಿಗಳು | ಹುದ್ದೆ |
|---|---|---|
| 1 | ಕೆ.ಎಲ್ ಗಂಗಾಧರಯ್ಯ | ಸಹಾಯಕ ನಿರ್ದೇಶಕರು, ನಗರ ಯೋಜನೆ, ಮತ್ತು ನೋಡಲ್ ಅಧಿಕಾರಿ, ವಾರ್ಡ್ ನಂ. 05(ಜಕ್ಕೂರು) ಹಾಗೂ |
| 2 | ವೈ.ಎನ್ ಮಹಂತೇಶ್ ಕುಮಾರ್ | ಕಾರ್ಯದರ್ಶಿಗಳು, ವಾರ್ಡ್ ಕಮಿಟಿ ವಾರ್ಡ್ ನಂ. 06 , ಮತ್ತು ಸಹಾಯಕ ಅಭಿಯಂತರರು |
| 3 | ಶ್ರೀ ಮುರಳಿಧರ್ ಎಸ್ | ವೈದ್ಯಾಧಿಕಾರಿಗಳು, ಪ್ರಾ. ಆರೋಗ್ಯ ಕೇಂದ್ರ ಅಗ್ರಹಾರ ಬಡಾವಣೆ |
| 4 | ಶ್ರೀ ಸೋಮಶೇಖರ್ | ವ್ಯವಸ್ಥಾಪಕರು, ಕಂದಾಯ ಉಪ ವಿಭಾಗ |
| 5 | ಶ್ರೀ ಜಿ. ವೆಂಕಟೇಶ್ | ಹಿರಿಯ ಆರೋಗ್ಯ ಪರಿವೀಕ್ಷಕರು, ವಾರ್ಡ್ ನಂ. 08 |
| 6 | ಶ್ರೀ ಅಶ್ವಥ್ | ಕಿರಿಯ ಆರೋಗ್ಯ ಪರಿವೀಕ್ಷಕರು ವಾರ್ಡ್ ನಂ. 08 |
| 7 | ಶ್ರೀ ಮಂಜುನಾಥ್ | ಕಿರಿಯ ಆರೋಗ್ಯ ಪರಿವೀಕ್ಷಕರು ವಾರ್ಡ್ ನಂ. 08 |
| 8 | ಶ್ರೀ ಸಂತೋಷ್ | ಒಣ ಕಸ ಮೇಲ್ವಿಚಾರಕರು. |

ಶ್ರೀ ವೈ.ಎನ್ ಮಹಂತೇಶ್ ಕುಮಾರ್ ಸಹಾಯಕ ಅಭಿಯಂತರರು ಹಾಗೂ ವಾರ್ಡ್ ಕಮಿಟಿ ಕಾರ್ಯದರ್ಶಿ ರವರು ಸಭೆಯನ್ನುದ್ದೇಶಿಸಿ ಮಾತನಾಡುತ್ತಾ, ಸಭೆಗೆ ಹಾಜರಾಗಿದ್ದ ಅಧಿಕಾರಿಗಳು, ಹಾಗೂ ಸಾರ್ವಜನಿಕರಿಗೆ ಸ್ವಾಗತಿಸುವ ಮೂಲಕ ಈ ಸಭೆಯಲ್ಲಿ ಚರ್ಚಿಸಬೇಕಾದ ಪ್ರಮುಖ ವಿಷಯಗಳ ಬಗ್ಗೆ ವಿವರಿಸುತ್ತಾ ಸದರಿ ಸಭೆಯ ಅಜೆಂಡ ವಿಷಯಗಳ ಬಗ್ಗೆ ತಿಳಿಸಿದರು.

1. ಘನತ್ಯಾಜ್ಯ ನಿರ್ವಹಣೆ ಬಗ್ಗೆ. ಅಶ್ವಥ್ ಕಿರಿಯ ಆರೋಗ್ಯ ಪರಿವೀಕ್ಷಕರು ಮಾತನಾಡಿ ವಾರ್ಡ್ ವ್ಯಾಪ್ತಿಯಲ್ಲಿ ಹೆಚ್ಚುವರಿ ಒಣ ಕಸ ಸಂಗ್ರಹಿಸಲು ಹೆಚ್ಚುವರಿ ಆಟೋ ಮತ್ತು ಪೌರಕಾರ್ಮಿಕರನ್ನು ನೇಮಿಸಲು ಕೋರಿದರು ಹಾಗೂ ಬ್ಲಾಕ್ ಸ್ಪಾಟ್‌ಗಳ ಸ್ಥಳಗಳಲ್ಲಿ ಸೌಂದರೀಕರಣ ಮಾಡಲು ಬೇಕಾದ ಸಾಮಗ್ರಿಗಳನ್ನು ಒದಗಿಸುವಂತೆ ಹಾಗೂ ವಾರ್ಡ್ ವ್ಯಾಪ್ತಿಗೆ ಹೆಚ್ಚುವರಿ ಪೌರಕಾರ್ಮಿಕರನ್ನು ಒದಗಿಸುವಂಥೆ ಕೋರಿರದರು.
2. ನೀರು ಮತ್ತು ಒಳಚರಂಡಿ ಇಲಾಖೆ: ರಾಯಲ್ ಎನ್‌ಕ್ಲೇವ್ ಬಡಾವಣೆಯಲ್ಲಿ ಬಿ.ಡಬ್ಲ್ಯೂ.ಎಸ್.ಎಸ್.ಬಿ ಇಲಾಖೆಯಿಂದ ಸ್ಯಾನಿಟರಿ ಪೈಪ್‌ಲೈನ್‌ಗಾಗಿ ಅಗೆತ ಮಾಡಿರುವುದರಿಂದ ಸಾರ್ವಜನಿಕರು ಓಡಾಡಲು ತೊಂದರೆಯಾಗಿರುತ್ತದೆ ಎಂದು ಆದುದರಿಂದ ತುರ್ತಾಗಿ ಕಾಮಗಾರಿಯನ್ನು ಪೂರ್ಣಗೊಳಿಸಿ



Scanned by CamScanner

ಸಾರ್ವಜನಿಕರಿಗೆ ಓಡಾಡಲು ಅನುಕೂಲವಾಗುವಂತೆ ಕ್ರಮ ವಹಿಸಲು ಕೋರಿದರು. ಹಾಗೂ ಟೆಲಿಕಾಂ ಬಡಾವಣೆ ಮತ್ತು ಶ್ರೀರಾಂಪುರ ಪ್ರದೇಶಗಳಲ್ಲಿ ಸ್ಯಾನಿಟರಿ ಮ್ಯಾನ್‌ಹೋಲ್ ತುಂಬಿ ಹರಿಯುತ್ತಿರುವುದರಿಂದ ರಸ್ತೆ ಮೇಲೆ ಕೊಳಚೆ ನೀರು ಹರಿಯುತ್ತಿರುವುರಿಂದ ಸರಿ ಪಡಿಸುವಂತೆ ಕೋರಿದರು.

3. ಆರೋಗ್ಯ ಇಲಾಖೆ: ವಾರ್ಡ್ ವ್ಯಾಪ್ತಿಯಲ್ಲಿ ನಮ್ಮ ಕ್ಲೀನಿಕ್‌ಗೆ ಸ್ಥಳವನ್ನು ಗುರುತಿಸುವಂತೆ ವಾರ್ಡ್ ಅಭಿಯಂತರರಿಗೆ ತಿಳಿಸಲಾಯಿತು ಹಾಗೂ ಬೆಂಗಳೂರು ನಗರ ಪ್ರದೇಶದಲ್ಲಿ ಚಿಕನ್‌ಗುನ್ಯ ಹಾಗೂ ಡೆಂಗ್ಯೂ ಜ್ವರದ ಪ್ರಕರಣಗಳು ಹೆಚ್ಚಾಗುತ್ತಿದ್ದು, ಸಾರ್ವಜನಿಕರಿಗೆ ಮನೆಗಳ ಹತ್ತಿರ ಮಳೆ ನೀರು ನಿಲ್ಲದಂತೆ ಹೆಚ್ಚರಿಕೆ ವಹಿಸಲು ಅರಿವು ಮೂಡಿಸಬೇಕಾಗಿರುತ್ತದೆ ಎಂದು ಸಭೆಗೆ ತಿಳಿಸಿದರು.
4. ಮಾನ್ಯ ವಿಶೇಷ ಆಯುಕ್ತರು (ಆಡಳಿತ/ಚುನಾವಣೆ) ರವರ ಆದೇಶದಂತೆ ಸಭೆಯಲ್ಲಿ ಮುಂಬರುವ ಬಿಬಿಎಂಪಿ ಚುನಾವಣೆ ಸಂಬಂಧ ಪ್ರಕಟಿಸಲಾಗಿರುವ ಕರಡು ಮತದಾರರ ಪಟ್ಟಿ ಸಂಬಂಧ ಹಕ್ಕು ಮತ್ತು ಆಕ್ಷೇಪಣೆಗಳನ್ನು ಸಲ್ಲಿಸುವ ಅವಧಿಯು ಇನ್ನೂ 7 ದಿನಗಳ ಕಾಲ ವಿಸ್ತರಿಸಲಾಗಿದ್ದು ಸಾರ್ವಜನಿಕರು ತಮ್ಮ ಆಕ್ಷೇಪಣೆಗಳು ಏನಾದರೂ ಇದ್ದಲ್ಲಿ ಸಂಬಂಧಪಟ್ಟ ಕಛೇರಿಗೆ ಸಲ್ಲಿಸಲು ಸೂಚನೆ ನೀಡಲಾಯಿತು.
5. ವಾರ್ಡ್ ವ್ಯಾಪ್ತಿಯ ಸಹಾಯಕ ಕಂದಾಯ ಅಧಿಕಾರಿಯವರ ಕಛೇರಿ ಹಾಗೂ ಸೇವಾ ಕೇಂದ್ರಗಳಲ್ಲಿ ಚುನಾವಣಾ ಗುರುತಿನ ಚೀಟಿಗೆ ಆಧಾರ ಲಿಂಕ್ ಮಾಡುವ ಪ್ರಕ್ರಿಯೆಯು ಶುರುವಾಗಿದ್ದು ಇದರ ಉಪಯೋಗ ಪಡೆದುಕೊಳ್ಳಲು ಸೂಚನೆ ನೀಡಲಾಯಿತು.

ಕೊನೆಯದಾಗಿ ಮಾನ್ಯ ನೋಡೆಲ್ ಅಧಿಕಾರಿಗಳು, ವಾರ್ಡ್ ಸಮಿತಿ ರವರು ಮಾತನಾಡಿ ಈವರೆವಿಗೂ ಸಭೆಯಲ್ಲಿ ಚರ್ಚಿಸಿರುವ ಎಲ್ಲಾ ವಿಷಯಗಳನ್ನು ಗಂಬೀರವಾಗಿ ಪರಿಗಣಿಸಿ ಸಂಬಂಧಪಟ್ಟ ಎಲ್ಲಾ ಇಲಾಖೆಯ ಅಧಿಕಾರಿಗಳು ಕ್ರಮ ವಹಿಸುವಂಥೆ ಸೂಚಿಸಿದರು ಹಾಗೂ ಕೋವಿಡ್-19ರ ಸಂಬಂಧ ಮೇಲಾಧಿಕಾರಿಗಳಿಂದ ಬರುವ ಸೂಚನೆ ಮತ್ತು ಆದೇಶಗಳನ್ನು ನಿಯಮಾಸುಸಾರ ಪಾಲಿಸುವಂಥೆ ಹಾಗೂ ಕಾರ್ಯರೂಪಕ್ಕೆ ತರಲು ಕಾರ್ಯೋನ್ಮುಖರಾಗುವಂತೆ ಸೂಚಿಸುತ್ತಾ ಮುಂದಿನ ಸಭೆಗೆ ಕಡ್ಡಾಯವಾಗಿ ಎಲ್ಲಾ ವಿಭಾಗದ ಅಧಿಕಾರಿಗಳು ಸಭೆಯಲ್ಲಿ ಹಾಜರಿರುವಂಥೆ ಕ್ರಮ ವಹಿಸಲು ಸೂಚಿಸುತ್ತಾ ವಂದನಾರ್ಪಣೆಯೊಂದಿಗೆ ಸಭೆಯನ್ನು ಮುಕ್ತಾಯಗೊಳಿಸಲಾಯಿತು.

ಸದಸ್ಯ ಕಾರ್ಯದರ್ಶಿ
ಹಾಗೂ ಸಹಾಯಕ ಅಭಿಯಂತರರು
ವಾರ್ಡ್‌ಸಮಿತಿ, ವಾರ್ಡ್ ನಂ. 08(ಜಕ್ಕೂರು)

03/09/22
ನೋಡಲ್ ಅಧಿಕಾರಿಗಳು
ವಾರ್ಡ್ ಸಮಿತಿ, ವಾರ್ಡ್ ನಂ. 08, (ಜಕ್ಕೂರು)

ಪ್ರತಿಯನ್ನು,

1. ಕೌನ್ಸಿಲ್ ಕಾರ್ಯದರ್ಶಿ, ಬಿಬಿಎಂಪಿ ಕೇಂದ್ರಕಛೇರಿ, ರವರ ಅವಗಾಹನೆಗಾಗಿ ಸಲ್ಲಿಸಿದೆ.
2. ಜಂಟಿಆಯುಕ್ತರು, ಯಲಹಂಕ ವಲಯರವರಿಗೆ ಅವಗಾಹನೆಗೆ ಸಲ್ಲಿಸಿದೆ.
3. ಮುಖ್ಯಅಭಿಯಂತರರು, ಯಲಹಂಕ ವಲಯರವರಿಗೆ ಅವಗಾಹನೆಗೆ ಸಲ್ಲಿಸಿದೆ.
4. ಕಂದಾಯ ಅಧಿಕಾರಿಗಳು (ಯಲಹಂಕ) ಬೆಂಗಳೂರು ರವರ ಅವಗಾಹನೆಗೆ ಸಲ್ಲಿಸಿದೆ.
5. ಕಾರ್ಯಪಾಲಕಅಭಿಯಂತರರು, ಬ್ಯಾಟರಾಯನಪುರ ವಿಭಾಗರವರಿಗೆ ಸಲ್ಲಿಸಿದೆ
6. ಕಛೇರಿಕಡತಕ್ಕೆ.



Scanned by CamScanner